ದಿನಾಂಕಃ **20.03.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.

ಹೆಚ್ಚುವರಿ ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಸಿ ಸಿ ಬಿ ವಕೀಲರಿಂದಃ

ನಾನು ಈ ವ್ಯಾಜ್ಯದಲ್ಲಿ ವಾದಿಯಾಗಿದ್ದು, ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು, ನನ್ನ ವಕೀಲರಿಗೆ ನಾನೇ ನನ್ನ ಪರವಾಗಿ ಸಲ್ಲಿಸಿದ ಮುಖ್ಯ ವಿಚಾರಣಾ ಪ್ರಮಾಣ ಪತ್ರದ ಅಂಶಗಳನ್ನು ಹೇಳಿ ಬರೆಸಿದ್ದು, ನಾನೇ ಹೇಳಿ ಬೆರಳಚ್ಚು ಮಾಡಿಸಿ ಓದಿ, ತಿಳಿದುಕೊಂಡು ಸಹಿಯನ್ನು ಹಾಕಿರುತ್ತೇನೆ. ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ.

ಈ ಹಿಂದೆ ದಾಖಲೆಗಳನ್ನು ನಿಶಾನೆಗೊಳಿಸಲಾಗಿದೆ.

ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟಿ ಸವಾಲಿಗೆ ಸಮಯಾವಕಾಶ ಕೋರಿದ್ದು, ಸದರಿ ದಾವೆಯು ಮಾನ ಹಿರಿಯ ಸಿವಿಲ್ ನ್ಯಾಯಾಧೀಶ ನ್ಯಾಯಾಲಯ ಸೊರಬ ಪ್ರಕರಣವನ್ನು ಮತ್ತೊಮ್ಮೆ ಪಕ್ಷಗಾರರಿಗೆ ಸಾಕ್ಷಿ ನುಡಿಯಲು ಅವಕಾಶ ನೀಡಿದ್ದು ಹಾಗೂ ಪ್ರತಿವಾದಿಯವರಿಗೆ ರೂ.2,500/- ದಂಡ ವಿಧಿಸಿ ಪ್ರಕರಣವನ್ನು ಮರುವಿಚಾರಣೆಗೆ ಕಳುಹಿಸಿಕೊಟ್ಟಿರುತ್ತಾರೆ. ಆದರೆ ಪ್ರತಿವಾದಿಯವರು ಸದರಿ ದಂಡವನ್ನು ವಾದಿಗೆ ಪಾವತಿಸಿರುವುದಿಲ್ಲ. ಆದ ಕಾರಣ ಪಾಟಿ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.

ಮರುವಿಚಾರಣೆಃ ಇಲ್ಲ.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).

ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.

ಪ್ರಧಾನ ವ್ಯವಹಾರ ನ್ಯಾ. ಮತ್ತು ಜೆ.ಎಂ.ಎಫ್.ಸಿ
ಸೊರಬ.